## ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 13.04.2022ರಂದು ಪೂರ್ವಾಹ್ನ ಗಂಟೆ 10:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2022ನೇ ಸಾಲಿನ ದ್ವಿತೀಯ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು:**

| ಕ್ರ. ಸಂ. | | | ಸಹಿ |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ<br>ಕುಲಪತಿಗಳು | ಅಧ್ಯಕ್ಷರು | |
| 2. | ಶ್ರೀ ಶ್ರೀಧರ ಬಾಬು ಎ.ಜಿ.,<br>ಜಂಟಿ ನಿರ್ದೇಶಕರು,<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಕರುಣಾಕರ್ ಎ. ಕೋಟೆಗಾರ್ | ಸದಸ್ಯರು | |
| 4. | ಶ್ರೀ ರವಿಚಂದ್ರ ಪಿ.ಎಂ. | ಸದಸ್ಯರು | |
| 5. | ಡಾ. ಜೆರಾಲ್ಡ್ ಸಂತೋಷ್ ಡಿ'ಸೋಜ,<br>ಡೀನರು | ಸದಸ್ಯರು | |
| 6. | ಫಾ. ಅಲ್ವಿನ್ ಸೆರವ್ರೋ | ಸದಸ್ಯರು | |
| 7. | ಡಾ. ಶಂಕರ ಭಟ್ ಪಿ. | ಸದಸ್ಯರು | |
| 8. | ಶ್ರೀಮತಿ ಸುಭಾಶಿಣಿ ಶ್ರೀವತ್ಸ | ಸದಸ್ಯರು | |
| 9. | ಶ್ರೀ ಕೆ. ರಮೇಶ | ಸದಸ್ಯರು | |
| 10. | ಶ್ರೀ ವಿವೇಕಾನಂದ ಪನಿಯಾಳ | ಸದಸ್ಯರು | |
| 11. | ಶ್ರೀ ರವೀಂದ್ರನಾಥ ರೈ | ಸದಸ್ಯರು | |
| 12. | ಡಾ. ಎಂ. ಎಸ್. ತಳವಾರ | ಸದಸ್ಯರು | |
| 13. | ಶ್ರೀ ಮೋಹನ್ ಪಡಿವಾಳ್ | ಸದಸ್ಯರು | |
| 14. | ಡಾ. ಎ.ಪಾರ್ವತಿ ಅಪ್ಪಯ್ಯ | ಸದಸ್ಯರು | |
| 15. | ಪ್ರೊ. ವಿಶ್ವನಾಥ್. ಪ್ರಾಧ್ಯಾಪಕರು | ಸದಸ್ಯರು | |
| 16. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ<br>(ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 17. | ಪ್ರೊ. ಪಿ. ಎಲ್. ಧರ್ಮ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 18. | ಪ್ರೊ. ವೈ. ಮುನಿರಾಜು<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 19. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

## ಪ್ರಾಸ್ತಾವಿಕ

ಮಾನ್ಯ ಕುಲಪತಿಗಳು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.

1. ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರು ದಿನಾಂಕ 08.04.2022 ರಂದು ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಭೇಟಿ ನೀಡಿರುವ ವಿಷಯವನ್ನು ಸಭೆಗೆ ತಿಳಿಸಿದರು. ವಿಶ್ವವಿದ್ಯಾನಿಲಯದ ಕಾರ್ಯವಿಧಾನಗಳ, ಎಲ್ಲಾ ವಿಭಾಗಗಳ ಬಗ್ಗೆ ಭೇಟಿಯ ಸಂದರ್ಭದಲ್ಲಿ ಪ್ರಾಧಿಕಾರದವರಿಗೆ ವಿವರಿಸಲಾಗಿ, ಪ್ರಾಧಿಕಾರದವರು ಈ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿರುವ ವಿಷಯಗಳನ್ನು ಸಭೆಗೆ ತಿಳಿಸುತ್ತಾ ಪ್ರಾಧಿಕಾರದಿಂದ ಸೂಚಿಸಲ್ಪಟ್ಟಿರುವ ಅಂಶಗಳನ್ನು ಮುಂಬರುವ ದಿನಗಳಲ್ಲಿ ವಿಶ್ವವಿದ್ಯಾನಿಲಯದ ಆಡಳಿತದಲ್ಲಿ ಸೂಕ್ತ ರೀತಿಯಲ್ಲಿ ಬಳಸಿಕೊಳ್ಳಲಾಗುವುದೆಂಬುದಾಗಿಯೂ ಸಭೆಗೆ ತಿಳಿಸಿದರು. ಕನ್ನಡಕ್ಕೆ ಪ್ರಾಧಾನ್ಯತೆ ಕೊಡುವ ದೃಷ್ಠಿಯಿಂದ ವಿಶ್ವವಿದ್ಯಾನಿಲಯದ ಲಾಂಛನದಲ್ಲಿ ಸೂಕ್ತ ತಿದ್ದುಪಡಿ ಮಾಡುವಂತೆ ಸಲಹೆ ನೀಡಿರುವ ವಿಷಯವನ್ನು ಸಭೆಯಲ್ಲಿ ಪ್ರಸ್ತಾಪಿಸಿದರು. ಸದರಿ ಸಂದರ್ಭದಲ್ಲಿ ಪ್ರಾಧಿಕಾರದ ವತಿಯಿಂದ ವಿಶ್ವವಿದ್ಯಾನಿಲಯಕ್ಕೆ ಒಂದು ದೊಡ್ಡ ಗಾತ್ರದ ಕನ್ನಡ ಅಂಕೆಗಳನ್ನೊಳಗೊಂಡಿರುವ ಗಡಿಯಾರವನ್ನು ನೀಡಿರುವ ವಿಷಯವನ್ನು ಬಹಳ ಹೆಮ್ಮೆಯಿಂದ ಸಭೆಯ ಗಮನಕ್ಕೆ ತಂದರು.
2. ಮಂಗಳೂರು ವಿಶ್ವವಿದ್ಯಾನಿಲಯದ 40 ನೇ ವಾರ್ಷಿಕ ಘಟಿಕೋತ್ಸವನ್ನು ದಿನಾಂಕ 23.04.2022ರಂದು ಮಧ್ಯಾಹ್ನ 12.15ಕ್ಕೆ ವಿಶ್ವವಿದ್ಯಾನಿಲಯದಲ್ಲಿ ಹಮ್ಮಿಕೊಂಡಿರುವ ವಿಷಯವನ್ನು ಸಭೆಗೆ ತಿಳಿಸುತ್ತಾ, ಘಟಿಕೋತ್ಸವದ ತಯಾರಿ ಹಾಗೂ ಇತರೇ ಕಾರ್ಯವಿಧಾನಗಳನ್ನು ವಿಸ್ತಾರವಾಗಿ ತಿಳಿಸಿದರು.
3. ವಿಶ್ವವಿದ್ಯಾನಿಲಯದ Double Entry System ವ್ಯವಸ್ಥೆಯ ಪ್ರಗತಿಯ ಬಗ್ಗೆ ಸಿಂಡಿಕೇಟು ಸದಸ್ಯರೋರ್ವರು ಅಪೇಕ್ಷಿಸಿದಾಗ ಸದರಿ ವಿಷಯಕ್ಕೆ ಸಂಬಂಧಿಸಿ, ಎಲ್ಲಾ ವಿಭಾಗಗಳಿಂದ Physical Documents ಕ್ರೂಢೀಕರಣ ಪ್ರಕ್ರಿಯೆಯು ನಡೆಯುತ್ತಿದ್ದು, ಶೀಘ್ರದಲ್ಲಿ ಸದರಿ ಪ್ರಕ್ರಿಯೆಯು ಪೂರ್ಣಗೊಳ್ಳಲಿರುವುದೆಂಬುದಾಗಿ ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದರು.

## I. ನಡವಳಿಗಳ ದೃಢೀಕರಣ

1. ದಿನಾಂಕ 29.03.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

**– ದೃಢೀಕರಿಸಲಾಯಿತು. –**

## II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ವಿಸ.2:1(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 40 ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪ್ರದಾನ ಮಾಡಲಿರುವ ಚಿನ್ನದ ಪದಕದ ಮಾದರಿಯಲ್ಲಿ ಬದಲಾವಣೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಿ, ವಿಶ್ವವಿದ್ಯಾನಿಲಯದ 40ನೇ ವಾರ್ಷಿಕ

ಘಟಿಕೋತ್ಸವಕ್ಕೆ ಮಾತ್ರ ಅನ್ವಯವಾಗುವಂತೆ ಅನುಮೋದಿಸಲಾಯಿತು.
ಮುಂದುವರಿದು, ವಿಶ್ವವಿದ್ಯಾನಿಲಯದಿಂದ ಪ್ರದಾನ ಮಾಡಲಿರುವ ಚಿನ್ನದ ಪದಕದ ಬಗ್ಗೆ ವಿಸ್ತೃತವಾದ ವರದಿಯನ್ನು ತಯಾರಿಸಿ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿಸ.2:2(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ/ಘಟಕ/ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತಾ ಪಟ್ಟಿಯನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಪ್ರಸ್ತಾವನೆಯಲ್ಲಿ ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ (ಸಂಯೋಜಿತ/ಘಟಕ/ಸ್ವಾಯತ್ತ) ಎಲ್ಲಾ 215 ಕಾಲೇಜುಗಳ ಮಾಹಿತಿಗಳು ಒಳಗೊಂಡಿರದಿರುವುದರಿಂದ ಸದರಿ ಮಾಹಿತಿಗಳನ್ನು ಕ್ರೂಢೀಕರಿಸಿಕೊಂಡು, ಸಮಗ್ರ ಮಾಹಿತಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.2:3(2022)

**ವಿಷಯ:** ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿನ ಅಧ್ಯಾಪಕರು ತಾತ್ಕಾಲಿಕ ನೆಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ ಎನ್ನಲಾದ ದೂರಿನ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಿ, ಈ ಬಗ್ಗೆ ಸೂಕ್ತ ಆಡಳಿತಾತ್ಮಕ ಕ್ರಮ ಕೈಗೊಳ್ಳಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.2:4(2022)

**ವಿಷಯ:** ಪ್ರೊ. ವಿಶ್ವನಾಥ್, ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಬಗ್ಗೆ ಸರ್ಕಾರದ ಪತ್ರದ ನಿರ್ದೇಶನದಂತೆ ವಿಶ್ವವಿದ್ಯಾನಿಲಯದ ಹಂತದಲ್ಲಿಯೇ ಕ್ರಮಕೈಗೊಳ್ಳುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಪ್ರೊ. ವಿಶ್ವನಾಥ್, ಪ್ರಾಧ್ಯಾಪಕರು, ಅರ್ಥಶಾಸ್ತ್ರ ವಿಭಾಗ, ಇವರ ನೇಮಕಾತಿ ಬಗ್ಗೆ ಕಾನೂನು ತಜ್ಞರಿಂದ ಪಡೆದಿರುವ ವರದಿಯನ್ನು ಪರಿಶೀಲಿಸಲಾಯಿತು. ಸದರಿಯವರ ನೇಮಕಾತಿಯು ಕ್ರಮಬದ್ಧವಾಗಿದೆಯೆಂದು ಸಿಂಡಿಕೇಟು ನಿರ್ಣಯಿಸಿತು.
ಮಾನ್ಯ ರಾಜ್ಯಪಾಲರ ಕಛೇರಿಯಿಂದ ದಿನಾಂಕ 26.04.2019 ರ ಪತ್ರವು ವಿಶ್ವವಿದ್ಯಾನಿಲಯದಲ್ಲಿ ಸ್ವೀಕೃತವಾಗಿದ್ದು, ಸಿಂಡಿಕೇಟಿನ ಗಮನಕ್ಕೆ ಮಾಹಿತಿಯನ್ನು ಸಕಾಲದಲ್ಲಿ ನೀಡದೆ ವಿಳಂಬವಾಗಿರುವುದಕ್ಕೆ ಕಾರಣರಾದ ಸಿಬ್ಬಂದಿಗಳ ಬಗ್ಗೆ ಸೂಕ್ತ ತನಿಖೆ ನಡೆಸಲು ಪ್ರೊ. ಎಂ. ಎಸ್. ತಳವಾರ್, ಸಿಂಡಿಕೇಟು ಸದಸ್ಯರು ಇವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ಸಮಿತಿಯನ್ನು ರಚಿಸಿ ಮುಂದಿನ ಸಿಂಡಿಕೇಟು ಸಭೆಗೆ ವರದಿಯನ್ನು ನೀಡಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.2:5(2022)

**ವಿಷಯ:** ಡಾ. ಉಮೇಶ್ ನಾಯ್ಕ್, ಸಹಾಯಕ ಪ್ರಾಧ್ಯಾಪಕರು, ಗ್ರಂಥಾಲಯ ಹಾಗೂ ಮಾಹಿತಿ ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರ ವಿರುದ್ಧ ವಿಭಾಗದ ವಿದ್ಯಾರ್ಥಿನಿಯರು ನೀಡಿರುವ ದೂರಿನ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಪ್ರಕರಣಕ್ಕೆ ಸಂಬಂಧಿಸಿ, ಸಮಗ್ರ ಮಾಹಿತಿ/ದಾಖಲೆಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.2:6(2022)

**ವಿಷಯ:** ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು ಮತ್ತು ದೂರಶಿಕ್ಷಣ ಕೇಂದ್ರ, ಮಂಗಳೂರು ಇಲ್ಲಿನ ಲೋಪ ದೋಷಗಳ ಕುರಿತು – ತನಿಖಾ ವರದಿಯ ಬಗ್ಗೆ.

**ನಿರ್ಣಯ:** ತನಿಖಾ ವರದಿಯನ್ನು ಸಿಂಡಿಕೇಟು ಪರಿಶೀಲಿಸಿತು. ಈ ಬಗ್ಗೆ ಎಸಗಲಾಗಿರುವ ಅಪರಾಧ ಕೃತ್ಯಗಳ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲು ಪ್ರಕರಣದ ಕುರಿತು ಎ. ಸಿ. ಬಿ. (ಭ್ರಷ್ಟಾಚಾರ ನಿಗ್ರಹ ದಳ) ಗೆ ಎಲ್ಲಾ ದಾಖಲೆಗಳ ಸಹಿತ (ಆಂತರಿಕ ತನಿಖಾ ವರದಿಗಳ ಸಹಿತ) ಲಿಖಿತ ದೂರನ್ನು ದಾಖಲಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಈ ಕುರಿತು ಲಿಖಿತ ದೂರನ್ನು ಸಿದ್ಧಪಡಿಸಿ, ಸಿಂಡಿಕೇಟಿನ ಅನುಮೋದನೆಯನ್ನು ಪಡೆದು ಎ. ಸಿ. ಬಿ. (ಭ್ರಷ್ಟಾಚಾರ ನಿಗ್ರಹ ದಳ) ಪ್ರಥಮ ವರ್ತಮಾನ ವರದಿಯನ್ನು ಸಲ್ಲಿಸಲು ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿಸ.2:7(2022)

**ವಿಷಯ:** ಜಿಲ್ಲಾ ವ್ಯಾಪ್ತಿಯಲ್ಲಿನ ವಿಶ್ವವಿದ್ಯಾನಿಲಯಗಳ ಆವರಣದಲ್ಲಿ "ದೀನ ದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯ" ಸಂಕೀರ್ಣವನ್ನು ನಿರ್ಮಾಣ ಮಾಡಲು ಉಚಿತವಾಗಿ ಜಮೀನು ಒದಗಿಸುವ ಬಗ್ಗೆ.

**ನಿರ್ಣಯ:** ಸರಕಾರದ ಮಾರ್ಗಸೂಚಿಗಳನ್ನು ಪಾಲಿಸಿಕೊಂಡು ನಿಯಮಾನುಸಾರ "ದೀನ ದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯ" ಸಂಕೀರ್ಣವನ್ನು ವಿಶ್ವವಿದ್ಯಾನಿಲಯದಲ್ಲಿ ಸ್ಥಾಪಿಸಲು ಅಗತ್ಯವಿರುವಷ್ಟು ಜಮೀನನ್ನು ಮಾತ್ರ ನೀಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿಸ.2:8(2022)

**ವಿಷಯ:** ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದ NME-ICT ಯೋಜನೆಯಡಿ ಭಾರತ ಸಂಚಾರ ನಿಗಮ ಲಿ. (BSNL) ನಿಂದ 1 Gbps Internet Connectivity ಯ ಶುಲ್ಕ ಪಾವತಿ ಬಗ್ಗೆ.

**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿಸ.2:9(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅರೆಭಾಷೆ ಸಂಶೋಧನಾ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ.

| | |
|---|---|
| **ನಿರ್ಣಯ:** | ಪ್ರಸ್ತಾವನೆಯನ್ನು ಸಿಂಡಿಕೇಟು ಗಮನಿಸಿತು. |
| **ಕಾರ್ಯಸೂಚಿ ಸಂಖ್ಯೆ:** | ಡಿಇವಿ:ವಿಸ.2:10(2022) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗ/ಕೋರ್ಸುಗಳಿಗೆ Adjunct Faculty ಗಳ ನೇಮಕಾತಿ ಹಾಗೂ ಕಾರ್ಯ ನಿರ್ವಹಿಸಿದ ವರದಿ. |
| **ನಿರ್ಣಯ:** | ಪ್ರಸ್ತಾವನೆಯನ್ನು ಸುಧೀರ್ಘವಾಗಿ ಚರ್ಚಿಸಲಾಯಿತು. ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ Adjunct Faculty ಗಳ ನೇಮಕಾತಿಗಳು ಯು.ಜಿ.ಸಿ. ಮಾರ್ಗಸೂಚಿಗಳನ್ವಯ ಇಲ್ಲದಿರುವುದನ್ನು ಸಿಂಡಿಕೇಟು ಗಮನಿಸಿತು. ಆದುದರಿಂದ ವಿಶ್ವವಿದ್ಯಾನಿಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ Adjunct Faculty ಗಳನ್ನು ತಕ್ಷಣದಿಂದ ಅನ್ವಯವಾಗುವಂತೆ ಕೈಬಿಡಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ತೊಂದರೆಯಾಗುತ್ತಿದ್ದಲ್ಲಿ ಸದರಿ ಸ್ಥಾನಗಳಿಗೆ ಸೂಕ್ತ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಲು ಕುಲಸಚಿವರಿಗೆ ಅಧಿಕಾರ ನೀಡಲಾಯಿತು.<br>ಈ ಬಗ್ಗೆ ಸಮಗ್ರ ವರದಿಯನ್ನು ಮುಂದಿನ ಸಿಂಡಿಕೇಟು ಸಭೆಯಲ್ಲಿ ಮಂಡಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |
| **ಕಾರ್ಯಸೂಚಿ ಸಂಖ್ಯೆ:** | ಪ.ಜಾ.ಪ.ಪಂ.ಘಟಕ:ವಿಸ.2:11(2022) |
| **ವಿಷಯ:** | M/s. Keonics ಸಂಸ್ಥೆಯಿಂದ ಖರೀದಿಸಿದ ಲ್ಯಾಪ್‌ಟಾಪ್‌ಗಳ ಮೊತ್ತವನ್ನು ಪಾವತಿಸುವ ಬಗ್ಗೆ. |
| **ನಿರ್ಣಯ:** | ಅನುಮೋದಿಸಲಾಯಿತು. |
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟು:ವಿಸ.2:12(2022) |
| **ವಿಷಯ:** | ಡಾ. ಪಾರ್ವತಿ ಅಪ್ಪಯ್ಯ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ. |
| **ವಿಷಯ 3.** | Transfer back the teacher who are transferred to Mangalore University/ University College without proper replacement (transfer) to FMKMC. |
| **ನಿರ್ಣಯ:** | ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಮತ್ತು ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜುಗಳ ಶಿಕ್ಷಕರುಗಳ ಸಮಗ್ರ ವರದಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಪ್ರಸ್ತಾವನೆ ಮಂಡಿಸಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |
| **ಕಾರ್ಯಸೂಚಿ ಸಂಖ್ಯೆ:** | ಪರೀಕ್ಷಾಂಗ:ವಿಸ.2:13(2022) |
| **ವಿಷಯ:** | MSIL ರವರಿಂದ ಪ್ರಿಪಿಂಟೆಡ್ ಅಂಕಪಟ್ಟಿಗಳನ್ನು ಖರೀದಿಸಿರುವ ಬಗ್ಗೆ. |
| **ನಿರ್ಣಯ:** | ಘಟನೋತ್ತರವಾಗಿ ಅನುಮೋದಿಸಲಾಯಿತು. |

**ಇತರ ವಿಷಯಗಳು:**

1. ಪ್ರೊ. ಅರಬಿ ಯು., ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗ, ಇವರ ವಿರುದ್ಧ ಮಾಡಲಾಗಿರುವ ಲೈಂಗಿಕ ಕಿರುಕುಳ ಆರೋಪ ಪ್ರಕರಣದಲ್ಲಿ ಕರ್ನಾಟಕ ಹೈಕೋರ್ಟಿನ ವಿಭಾಗೀಯ ಪೀಠವು ಅಪೀಲು

ಸಂಖ್ಯೆ WA 1081/2021 S RES ದಿನಾಂಕ 05.04.2022 ರಲ್ಲಿ ನೀಡಿರುವ ಮಧ್ಯಂತರ ಆದೇಶದ ಸಿಂಧುತ್ವವನ್ನು ಪ್ರಶ್ನಿಸಿ ಸದರಿ ಆದೇಶದ ವಿರುದ್ಧ ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಹಾಗೂ ಸೂಕ್ತ ಕಾನೂನು ಉಪಕ್ರಮ ಕೈಗೊಳ್ಳಲು ಸಿಂಡಿಕೇಟು ತೀರ್ಮಾನಿಸಿತು.

ಈ ಕುರಿತು ವಕೀಲರ ನೇಮಕಾತಿ ಹಾಗೂ ಶುಲ್ಕ ಪಾವತಿ ಮಾಡಲು ಮಾನ್ಯ ಕುಲಪತಿಗಳಿಗೆ ಸಂಪೂರ್ಣ ಅಧಿಕಾರವನ್ನು ನೀಡಲಾಯಿತು.

2. ವಿಶ್ವವಿದ್ಯಾನಿಲಯದ ಎಲ್ಲಾ ಶಿಕ್ಷಕೇತರ ಸಿಬ್ಬಂದಿಗಳ ವರ್ಗಾವಣೆಗೆ ಸಂಬಂಧಿಸಿ, ವರ್ಗಾವಣೆ ನೀತಿಯನ್ನು ತಯಾರಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಮುಂದುವರಿದು, ವಿಶ್ವವಿದ್ಯಾನಿಲಯದ ಆಡಳಿತಾತ್ಮಕ ಹಿತದೃಷ್ಟಿಯಿಂದ ಎಲ್ಲಾ ಆಡಳಿತ ಸಿಬ್ಬಂದಿಗಳನ್ನು ಪ್ರತೀ ಮೂರು ವರ್ಷಗಳಿಗೊಮ್ಮೆ ಕಡ್ಡಾಯವಾಗಿ ಆವರ್ತನ ನೆಲೆಯಲ್ಲಿ ಕುಲಸಚಿವರು (ಆಡಳಿತ), ಕುಲಸಚಿವರು (ಪರೀಕ್ಷಾಂಗ) ಹಾಗೂ ಹಣಕಾಸು ವಿಭಾಗಕ್ಕೆ ತಕ್ಷಣದಿಂದ ಅನ್ವಯವಾಗುವಂತೆ ವರ್ಗಾವಣೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಮೊದಲನೆ ಹಂತದ ಅನುಷ್ಠಾನದ ವರದಿಯನ್ನು ಮೇ 30 2022ರೊಳಗೆ ಸಿಂಡಿಕೇಟಿಗೆ ನೀಡಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.
3. ವಿಶ್ವವಿದ್ಯಾನಿಲಯದಲ್ಲಿ ಮತ್ತು ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳಲ್ಲಿ ಲೈಂಗಿಕ ಕಿರುಕುಳ ತಡೆಯಲು ವಿಶ್ವವಿದ್ಯಾನಿಲಯದ ಮಹಿಳಾ ಅಧ್ಯಯನ ಕೇಂದ್ರದೊಂದಿಗೆ ಸಮಾಲೋಚಿಸಿ ತರಬೇತಿ ಕಾರ್ಯಾಗಾರವನ್ನು ಆಯೋಜಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
4. ದಿನಾಂಕ 13.09.2021ರ ಸಿಂಡಿಕೇಟು ನಿರ್ಣಯದನುಸಾರ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳಿಂದ ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಿಗೆ ವರ್ಗಾವಣೆಯಾಗಿರುವ ಉಪನ್ಯಾಸಕರುಗಳ ಸಮಗ್ರ ವಿವರಗಳನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
5. ಡಾ. ರಾಜೇಂದ್ರ ಆರ್, ಸಹಾಯಕ ಪ್ರಾಧ್ಯಾಪಕರು, ಗಣಿತಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜಿಗೆ ವರ್ಗಾವಣೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
6. ಶೈಕ್ಷಣಿಕ ವರ್ಷ 2021–22ನೇ ಸಾಲಿಗೆ ಪ್ರವೇಶಾತಿ ಹೊಂದಿರುವ ಪರಿಶಿಷ್ಟ ಜಾತಿ/ ಪರಿಶಿಷ್ಠ ಪಂಗಡ, Category – I ಸಂಶೋಧನಾ ವಿದ್ಯಾರ್ಥಿಗಳಿಗೆ ವಿತರಿಸುತ್ತಿರುವ ಫೆಲೋಶಿಪ್‌ಗಳನ್ನು ಕೂಡಲೇ ಬಿಡುಗಡೆ ಮಾಡಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
7. ಜನವರಿ 2020ರಿಂದ ಈ ವರೆಗಿನ ಸಿಂಡಿಕೇಟು ಕೈಗೊಂಡಿರುವ ನಿರ್ಣಯಗಳಲ್ಲಿ ಅನುಷ್ಠಾನಕ್ಕೆ ಬಾಕಿ ಇರುವ ಸಿಂಡಿಕೇಟು ನಿರ್ಣಯಗಳ ಮಾಹಿತಿಯನ್ನು ಸಕಾರಣಗಳೊಂದಿಗೆ ಕ್ರೋಢೀಕರಿಸಿ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಮಾನ್ಯ ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| **ಸಹಿ/–** | **ಸಹಿ/–** |
| ಕುಲಸಚಿವರು | ಕುಲಪತಿಗಳು. |